ಕರ್ನಾಟಕ ಸರ್ಕಾರ

ಜನವರಿ 7, 2016

# ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಮುಫ್ತೀ ಮೊಹಮದ್ ಸಯೀದ್ ಅವರ ನಿಧನಕ್ಕೆ ಸಿದ್ದರಾಮಯ್ಯ ಸಂತಾಪ

ಬೆಂಗಳೂರು, ಜನವರಿ 7:

ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಶ್ರೀ ಮುಫ್ತೀ ಮೊಹಮದ್ ಸಯೀದ್ ಅವರ ನಿಧನಕ್ಕೆ ಕರ್ನಾಟಕದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಒಮ್ಮೆ ಕೇಂದ್ರ ಗೃಹ ಸಚಿವರಾಗಿ, ಎರಡು ಬಾರಿ ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿಯಾಗಿದ್ದ ಶ್ರೀ ಮುಫ್ತೀ ಮೊಹಮದ್ ಸಯೀದ್ ಅವರು ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದನಾ ಚಟುವಟಿಕೆಗಳನ್ನು ನಿಗ್ರಹಿಸುವಲ್ಲಿ ಮಹತ್ತರ ಪಾತ್ರ ವಹಿಸಿದ್ದರು. ಅಲ್ಲದೆ, ಕಣಿವೆ ರಾಜ್ಯದಲ್ಲಿ ಶಾಂತಿ ಸ್ಥಾಪನೆ ಮಾಡಿ, ಆ ರಾಜ್ಯವನ್ನು ಅಭಿವೃದ್ಧಿ ಹಾಗೂ ಪ್ರಗತಿಯತ್ತ ಮುನ್ನಡೆಸಲು ಬದ್ಧರಾಗಿದ್ದರು. ತಮ್ಮ ಎಂಭತ್ತನೇ ಹುಟ್ಟು ಹಬ್ಬವನ್ನು ಆಚರಿಸಿಕೊಳ್ಳುವ ಐದು ದಿನಗಳ ಮುನ್ನವೇ, ಶಾಂತಿಯ ಹರಿಕಾರ ಶ್ರೀ ಮುಫ್ತೀ ಮೊಹಮದ್ ಸಯೀದ್ ಅವರು ಮೃತರಾಗಿರುವುದು ಅತ್ಯಂತ ದುಃಖದ ಹಾಗೂ ನೋವಿನ ಸಂಗತಿಯಾಗಿದೆ ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

**********

ಡಿ ಪಿ ಎಂ